ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/22/ಸುತ್ತೋಲೆ/2023-24 ದಿನಾಂಕ: 11.10.2023.

# ಸುತ್ತೋಲೆ

ವಿಷಯ: ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಗ್ರಂಥಾಲಯದ ಪ್ರಭಾರವನ್ನು ವಹಿಸಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/100/ಗ್ರಂ.ಪ್ರಭಾರ/2020-21 ದಿನಾಂಕ:10.11.2020.

* * * * * *

ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಅಧ್ಯಯನಕ್ಕೆ ಮತ್ತು ಕೌಶಲ್ಯ ಅಭಿವೃದ್ಧಿಗಾಗಿ ಗ್ರಂಥಾಲಯವು ಪ್ರಮುಖ ಪಾತ್ರ ವಹಿಸುತ್ತಿದೆ. ಗ್ರಂಥಾಲಯಗಳ ನಿರ್ವಹಣೆಗಾಗಿ ಗ್ರಂಥಪಾಲಕರ ಕೊರತೆ ಇರುವಂತಹ ಕಾಲೇಜುಗಳಲ್ಲಿ, ಗ್ರಂಥಾಲಯದ ಪ್ರಭಾರ ವಹಿಸಿಕೊಳ್ಳುವ ಬಗ್ಗೆ ಈಗಾಗಲೇ ಇಲಾಖೆಯಿಂದ ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದರೂ ಸಹ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಗ್ರಂಥಾಲಯದ ಪ್ರಭಾರವನ್ನು ವಹಿಸಿಕೊಳ್ಳದೆ ಇಲಾಖಾ ಆದೇಶವನ್ನು ಉಲ್ಲಂಘಿಸಿ, ಗ್ರಂಥಾಲಯಗಳನ್ನು ಸರಿಯಾಗಿ ನಿರ್ವಹಿಸದೇ ಇರುವುದರಿಂದ, ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ತೊಂದರೆಯಾಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದ್ದು, ಇದನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಗ್ರಂಥಪಾಲಕರು ಕೊರತೆ ಇರುವಂತಹ ಕಾಲೇಜುಗಳಲ್ಲಿ ಗ್ರಂಥಾಲಯದ ಪೂರ್ಣ ಪ್ರಭಾರವನ್ನು ನಿಯಮಾನುಸಾರ ಕಾರ್ಯಭಾರ ಕೊರತೆ ಇರುವಂತಹ ಸಹಾಯಕ / ಸಹ ಪ್ರಾಧ್ಯಾಪಕರುಗಳಿಗೆ / ದೈಹಿಕ ಶಿಕ್ಷಣ ಬೋಧಕರುಗಳಿಗೆ ಪ್ರಭಾರ ವಹಿಸುವಂತೆ ತಿಳಿಸಲಾಗಿದೆ. ಹಾಗೂ ಒಂದು ವೇಳೆ ಎಲ್ಲಾ ಖಾಯಂ ಬೋಧಕರಿಗೆ ಪೂರ್ಣ ಕಾರ್ಯಭಾರವಿದ್ದಲ್ಲಿ ಸೇವಾ ಜೇಷ್ಠತೆಯಲ್ಲಿ ಕಿರಿಯರಾದ ಖಾಯಂ ಬೋಧಕರಿಗೆ ಪ್ರಭಾರವನ್ನು ಕಡ್ಡಾಯವಾಗಿ ವಹಿಸಿಕೊಡುವಂತೆ ಪ್ರಾಂಶುಪಾಲರಿಗೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ ಹಾಗೂ ಗ್ರಂಥಾಲಯವನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾಗುವಂತೆ ನಿರಂತರವಾಗಿ ಕಾರ್ಯನಿರ್ವಹಿಸಲು ಸೂಚಿಸಿದೆ. ಗ್ರಂಥಾಲಯದ ಪ್ರಭಾರವನ್ನು ವಹಿಸಿಕೊಳ್ಳಲು ನಿರಾಕರಿಸಿದ ಪಕ್ಷದಲ್ಲಿ ಅಂತಹವರ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳಲಾಗುವುದು.

ಗ್ರಂಥಾಲಯದ ದೈನಂದಿನ ಕೆಲಸ ಕಾರ್ಯಗಳು ಸುಗಮವಾಗಿ ನಡೆಸುವ ಮತ್ತು ಗ್ರಂಥಾಲಯಕ್ಕೆ ಸಂಬಂಧಿಸಿದ ಎಲ್ಲಾ ವಿಷಯಗಳ ನಿರ್ವಹಣೆಗೆ ಇಲಾಖೆ ಹೊರಡಿಸಿರುವ ಕೈಪಿಡಿಯು (Library Manual) ಇಲಾಖೆಯ ವೆಬ್‌ಸೈಟ್‌ನಲ್ಲಿ ಲಭ್ಯವಿದ್ದು, ಅದರನ್ವಯ ಕಾರ್ಯನಿರ್ವಹಿಸಲು ಸೂಚಿಸಿದೆ.

ಆಯುಕ್ತರು 16/10/2023
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ : ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.

1. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
4. ಕಛೇರಿ ಪ್ರತಿ.